## ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 411
2. ಮಾನ್ಯ ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಜಗದೇವ್ ಗುತ್ತೇದಾರ್ (ವಿಧಾನ ಸಭೆಯಿಂದ ಚುನಾಯಿತರಾದವರು)
3. ಉತ್ತರಿಸುವ ದಿನಾಂಕ : 29-01-2026
4. ಉತ್ತರಿಸುವ ಸಚಿವರು. : ಗೃಹ ಸಚಿವರು.

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಮರ್ಯಾದೆಗೇಡಿನ ಹತ್ಯೆಗಳು ಪದೇ ಪದೇ ಸಂಭವಿಸುತ್ತಿರುವ ವಿಷಯ ಗಮನಕ್ಕೆ ಬಂದಿದೆಯೇ? | ರಾಜ್ಯದಲ್ಲಿ ಮರ್ಯಾದೆಗೇಡಿನ ಹತ್ಯೆಗಳ ಕುರಿತು ಪ್ರಕರಣಗಳನ್ನು ದಾಖಲಿಸಲಾಗುತ್ತಿದೆ. |
| ಆ | ಬಂದಿದ್ದರೆ, ಅವುಗಳನ್ನು ತಡೆಗಟ್ಟಲು ತೆಗೆದುಕೊಂಡಿರುವ ಕ್ರಮಗಳೇನು? | ಮರ್ಯಾದೆಗೇಡಿನ ಹತ್ಯೆಗಳ ಪ್ರಕರಣಗಳು ಜರುಗದಂತೆ ಈ ಕೆಳಕಂಡಂತೆ ಕ್ರಮ ಕೈಗೊಳ್ಳಲಾಗಿದೆ:-<br><br>➢ ಪ್ರತಿ ತಿಂಗಳು ಜಿಲ್ಲೆಯ ಎಲ್ಲಾ ಪೊಲೀಸ್ ಠಾಣೆ ಮತ್ತು ಜಿಲ್ಲಾ ಪೊಲೀಸ್ ಕಛೇರಿಯಲ್ಲಿ ನಿಯಮಿತವಾಗಿ ಪ್ರತಿ 2ನೇ ಭಾನುವಾರ ಮತ್ತು ಕೊನೆಯ ಭಾನುವಾರ ಎಸ್.ಸಿ/ಎಸ್.ಟಿ. ಜನಾಂಗದವರ ಕುಂದು-ಕೊರತೆಗಳನ್ನು ಆಲಿಸುವ ಸಂಬಂಧ ಸಭೆಗಳನ್ನು ಆಯೋಜಿಸಲಾಗುತ್ತಿದೆ.<br><br>➢ ಪ್ರತಿ ಊರಿನ ದಲಿತರ ಕಾಲೋನಿಗೆ ನಿಯಮಿತವಾಗಿ ಹಾಗೂ ಕಡ್ಡಾಯವಾಗಿ ಪೊಲೀಸ್ ಸಿಬ್ಬಂದಿ ಮತ್ತು ಅಧಿಕಾರಿಗಳಿಂದ ಗಸ್ತು ನಿರ್ವಹಣೆ. ಆ ಸಮಯದಲ್ಲೂ ಸಹ ದಲಿತರ ಕುಂದು-ಕೊರತೆ ಕೇಳಿ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳ ಗಮನಕ್ಕೆ ತರಲಾಗುತ್ತಿದೆ.<br><br>➢ ಸಮಾಜದಲ್ಲಿರುವ ಅಸ್ಪೃಶ್ಯತೆಯನ್ನು ನಿವಾರಣೆ ಮಾಡುವ ನಿಟ್ಟಿನಲ್ಲಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಮತ್ತು ಜಿಲ್ಲಾಡಳಿತದೊಂದಿಗೆ ಸದಾ ಸಂಪರ್ಕದಲ್ಲಿದ್ದು, ಬೀದಿನಾಟಕಗಳು, ಅರಿವು |

| | | |
|---|---|---|
| | | ಕಾರ್ಯಕ್ರಮಗಳು ಮತ್ತು ಜಾಗೃತಿ ಕಾರ್ಯಕ್ರಮಗಳಲ್ಲಿ ಅಗತ್ಯ ಸಹಕಾರ ನೀಡಲಾಗುತ್ತಿದೆ.<br><br>➢ ಕ್ಯೂ.ಆರ್.ಟಿ. 112 ತುರ್ತು ಸ್ಪಂದನ, ಹಗಲು ಮತ್ತು ರಾತ್ರಿ ಪೊಲೀಸ್ ಬೀಟ್ ಹಾಗೂ ಗುಡ್‌ಮಾರ್ನಿಂಗ್ ಬೀಟ್ ನಂತಹ ವಿಧಾನಗಳ ಮೂಲಕ ಸಾರ್ವಜನಿಕರೊಂದಿಗೆ ಪೊಲೀಸ್ ಇಲಾಖೆ ಸಕ್ರಿಯವಾಗಿರುವಂತೆ ಕ್ರಮ ಕೈಗೊಳ್ಳಲಾಗಿರುತ್ತದೆ.<br><br>➢ ಸಾರ್ವಜನಿಕ ಭಿತ್ತಿಪತ್ರಗಳ ಮೂಲಕ ಮಹಿಳೆಯರು ಮತ್ತು ಮಕ್ಕಳು ಹಾಗೂ ಶಾಲಾ-ಕಾಲೇಜಿಗೆ ತೆರಳುವ ವಿದ್ಯಾರ್ಥಿನಿಯರಿಗೆ ಮಹಿಳಾ ದೌರ್ಜನ್ಯ ಅಪರಾಧಗಳ ಬಗ್ಗೆ, ಅವರ ಶಾಲಾ-ಕಾಲೇಜು ಮತ್ತು ವಸತಿನಿಲಯಗಳ ಬಳಿ ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಮೈಕ್‌ನಲ್ಲಿ ಪ್ರಸಾರ ಮಾಡುವ ಮೂಲಕ ಜನರಲ್ಲಿ ಅರಿವು ಮೂಡಿಸಲಾಗುತ್ತಿದೆ. ಸಾರ್ವಜನಿಕರಿಗೆ ಧ್ವನಿವರ್ಧಕಗಳ ಮೂಲಕ ಎಚ್ಚರಿಕೆ ಸಂದೇಶಗಳನ್ನು ನೀಡಲಾಗುತ್ತಿದೆ.<br><br>➢ ಮಹಿಳಾ ಮತ್ತು ಮಕ್ಕಳ ಚಟುವಟಿಕೆ ಹೆಚ್ಚು-ಹೆಚ್ಚು ಇರುವ ಸ್ಥಳಗಳಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸುವಂತೆ ಸ್ಥಳೀಯ ಆಡಳಿತ ಸಂಸ್ಥೆಗಳು, ಹಾಸ್ಟೆಲ್ ಹಾಗೂ ಮಹಿಳೆಯರ ಹೋಂಸ್ಟೇ ನಡೆಸುವ ಖಾಸಗಿ ಉದ್ಯಮಿಗಳಿಗೆ ಸೂಚಿಸಲಾಗಿರುತ್ತದೆ. ಪೊಲೀಸ್ ಇಲಾಖೆ ವತಿಯಿಂದಲೂ ಸಹ ಜಿಲ್ಲೆಯ ಪ್ರಮುಖ ನಗರ & ಪಟ್ಟಣಗಳ ಸೂಕ್ಷ್ಮ ಪ್ರದೇಶಗಳನ್ನು ಗುರುತಿಸಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಲಾಗಿರುತ್ತದೆ.<br><br>➢ ವಯಸ್ಕರು ತಮ್ಮ ಆಯ್ಕೆಯಂತೆ ಮದುವೆಯಾಗುವ ಸ್ವಾತಂತ್ರ್ಯವನ್ನು ರಕ್ಷಿಸುವ, ಗೌರವ, ಜಾತಿ, ಸಮುದಾಯ ಅಥವಾ ಸಂಪ್ರದಾಯದ ಹೆಸರಿನಲ್ಲಿ ವೈವಾಹಿತ ಸಂಬಂಧಗಳಲ್ಲಿ ಕಾನೂನು ಬಾಹಿರ ಹಸ್ತಕ್ಷೇಪವನ್ನು ನಿಷೇಧಿಸುವ, ಮಾನವ ಹಕ್ಕುಗಳ ಉಲ್ಲಂಘನೆಯನ್ನು ತಡೆಗಟ್ಟುವ, ಪೀಡಿತ ವ್ಯಕ್ತಿಗಳಿಗೆ ಮತ್ತು ಅದಕ್ಕೆ ಸಂಬಂಧಿಸಿದ ವಿಷಯಗಳಿಗೆ ಕಠಿಣ ಶಿಕ್ಷೆ, |

| | | |
|---|---|---|
| | | ರಕ್ಷಣಾ ಕ್ರಮಗಳನ್ನು ಒದಗಿಸುವ ಕುರಿತು "The Karnataka Freedom of Choice in the Marriage and Prevention and Prohibition of Crimes in the name of Honour and Tradition (Eva Nammava Eva Nammava) Bill, 2026 ಮಸೂದೆಯನ್ನು ಜಾರಿಗೆ ತರಲು ಪರಿಶೀಲಿಸಲಾಗುತ್ತಿದೆ. |
| ಇ | ಮರ್ಯಾದೆಗೇಡು ಹತ್ಯೆ ತಡೆಗೆ ಪ್ರತ್ಯೇಕ ಕಾನೂನು ಇಲ್ಲದೆ ಇರುವುದಕ್ಕೆ ಇಂತಹ ಪ್ರಕರಣಗಳು ಮರುಕಳಿಸಲು ಕಾರಣವೇ? | ಇಂತಹ ಘಟನೆಗಳನ್ನು ಹಾಲಿ ಇರುವ ಕಾನೂನಿನ ಸಮರ್ಪಕ ಅನುಷ್ಠಾನದ ಮೂಲಕವೇ ನಿಯಂತ್ರಿಸಬಹುದಾಗಿರುತ್ತದೆ. |
| ಈ | ಮರ್ಯಾದೆಗೇಡು ಹತ್ಯೆ ತಡೆಗೆ ಪ್ರತ್ಯೇಕ ಕಾನೂನು ರಚಿಸಲು ಸರ್ಕಾರ ಮುಂದಾಗುವುದೇ? | ಮುಂದುವರೆದು, ಮರ್ಯಾದೆಗೇಡು ಹತ್ಯೆ ತಡೆಗೆ ಪ್ರತ್ಯೇಕ ಕಾನೂನು ರಚಿಸಲು, "The Karnataka Freedom of Choice in the Marriage and Prevention and Prohibition of Crimes in the name of Honour and Tradition (Eva Nammava Eva Nammava) Bill, 2026 ಮಸೂದೆಯನ್ನು ಜಾರಿಗೆ ತರುವ ಮೂಲಕ ಈ ಕೆಳಕಂಡ ಉದ್ದೇಶಗಳಿಗಾಗಿ ಹೊಸ ಕಾನೂನು ರೂಪಿಸಲು ಕ್ರಮಕೈಗೊಳ್ಳಲಾಗುವುದು:-<br><br>i. ವಿವಾಹದಲ್ಲಿ ಆಯ್ಕೆ ಸ್ವಾತಂತ್ರ್ಯವನ್ನು ಒದಗಿಸಿ ಜಾತಿ ಆಧಾರಿತ ಅಪರಾಧಗಳನ್ನು ತಡೆಯಲು ಹಾಗೂ ನಿಷೇಧಿಸಲು;<br>ii. ಮಾನವ ಹಕ್ಕುಗಳ ಉಲ್ಲಂಘನೆಯನ್ನು ತಡೆಯಲು;<br>iii. ಅಂತರ್ಜಾತಿ ವಿವಾಹಗಳಿಗೆ ಗೌರವ ನೀಡಲು;<br>iv. ವೈಯಕ್ತಿಕ ಆಯ್ಕೆಗಳ ಮೇಲೆ ಜಾತಿ ಆಧಾರಿತ ಬಲವಂತದ ಭೇದಭಾವವನ್ನು ತಡೆಯಲು;<br>v. ಅಂತರ್ಜಾತಿ ವಿವಾಹಗಳನ್ನು ನೆರವೇರಿಸಲು "ಇವ ನಮ್ಮವ ಇವ ನಮ್ಮವ ವೇದಿಕೆ"ಯನ್ನು ಸ್ಥಾಪಿಸಲು. |

**ಸಂಖ್ಯೆ: HD 01 SDN 2026**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು